ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1569
2	ಸದಸ್ಯರ ಹೆಸರು	:	ಶ್ರೀ ಹೆಚ್.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
3	ಉತ್ತರಿಸುವ ದಿನಾಂಕ	:	18.03.2021
4	ಉತ್ತರಿಸುವ ಸಚಿವರು	:	ಮಾನ್ಯ ಯೋಜನಾ ಸಚಿವರು, ಯೋಜನೆ,ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ; (ಮಾಹಿತಿ ನೀಡುವುದು)	ಶಾಸಕರ ಅಭಿವೃದ್ಧಿ ಅನುದಾನವನ್ನು ಬಿಡುಗಡೆ ಮಾಡುವುದು ವಿಳಂಬವಾಗುತ್ತಿರುವುದಿಲ್ಲ. ಆರಂಭಿಕ ಶಿಲ್ಕು ಮತ್ತು ಬಿಡುಗಡೆಯಾದ ಅನುದಾನ ಸೇರಿದಂತೆ ಒಟ್ಟಾರೆ ಅನುದಾನದಲ್ಲಿ ಶೇಕಡ 75ರಷ್ಟು ವೆಚ್ಚ ಭರಸಿದ್ದಲ್ಲಿ ಮಾತ್ರ ಮುಂದಿನ ಕಂತಿನ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. ಆರಂಭಿಕ ಶಿಲ್ಕು ಸೇರಿದಂತೆ ಬಿಡುಗಡೆಯಾದ ಅನುದಾನವನ್ನು ಪೂರಕವಾಗಿ ಬಳಕೆ ಮಾಡಿಕೊಳ್ಳುವ ಬಗ್ಗೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.
(ಆ)	ಹಾಲಿ ನೀಡಲಾಗುತ್ತಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನ ವಾರ್ಷಿಕ ಎರಡು ಕೋಟಿ ರೂಪಾಯಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಎಷ್ಟು ಹೆಚ್ಚಳ ಮಾಡಲಾಗುವುದು ಮತ್ತು ಯಾವಾಗ ಹೆಚ್ಚಳ ಮಾಡಲಾಗುವುದು? (ಮಾಹಿತಿ ನೀಡುವುದು.)	ಇಲ್ಲ. ಶಾಸಕರ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ. ಅನ್ವಯಿಸುವುದಿಲ್ಲ.

ಸಂಖ್ಯೆ: ಪಿಡಿಎಸ್ 28 ಕೆಎಲ್ಎಸ್ 2021

(ಡಾ|| ನಾರಾಯಣಗೌಡ)
ಸಚಿವರು,
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ